## ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 32
ಉತ್ತರಿಸಬೇಕಾದ ದಿನಾಂಕ : 04-07-2023
ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪುನರ್ ಪ್ರಾರಂಭಿಸಿರುವ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯ ರೂಪು ರೇಷೆಗಳೇನು:(ಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು) | ಯಶಸ್ವಿನಿ ಯೋಜನೆಯು ವಿಮಾ ಯೋಜನೆಯಾಗಿರುವುದಿಲ್ಲ. ಇದು ಒಂದು ಆರೋಗ್ಯ ರಕ್ಷಣಾ ಯೋಜನೆಯಾಗಿರುತ್ತದೆ.<br>ಪರಿಷ್ಕೃತ ಯಶಸ್ವಿನಿ ಯೋಜನೆಯ ರೂಪು ರೇಷೆಗಳ ವಿವರವನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ. |
| ಆ) | ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯನ್ನು ಪುನ: ಪ್ರಾರಂಭಿಸಿರುವುದರಲ್ಲಿ ಲೋಪ ದೋಷಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: (ಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು) | ಪರಿಷ್ಕೃತ ಯಶಸ್ವಿನಿ ಯೋಜನೆಯಡಿ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಲ್ಲಿರುವ ಚಿಕಿತ್ಸೆಗಳನ್ನು ಮತ್ತು ಅದರಲ್ಲಿರುವ ದರಗಳನ್ನೇ ಪರಿಷ್ಕೃತ ಯಶಸ್ವಿನಿ ಯೋಜನೆಗೆ ಅಳವಡಿಸಿಕೊಳ್ಳಲಾಗಿದೆ. ಆದುದರಿಂದ ಯೋಜನೆಯಲ್ಲಿ ಲೋಪ ದೋಷಗಳು ಇದೆ ಎನ್ನುವುದು ನಿಜವಲ್ಲ.<br>ರಾಜ್ಯದ ಕೆಲವು ನೆಟ್‌ವರ್ಕ್ ಆಸ್ಪತ್ರೆಗಳು ಪರಿಷ್ಕೃತ ಯಶಸ್ವಿನಿ ಯೋಜನೆಯಲ್ಲಿ ಅಳವಡಿಸಿಕೊಂಡಿರುವ ಚಿಕಿತ್ಸಾ ದರಗಳು ತುಂಬಾ ಕಡಿಮೆ ಇರುವುದಾಗಿ ತಿಳಿಸಿ, ಈ ಆಸ್ಪತ್ರೆಗಳ ಪ್ರಾತಿನಿಧಿಕ ಸಂಸ್ಥೆಗಳಾದ IMA, KMC ಮತ್ತು ಖಾಸಗಿ ಆಸ್ಪತ್ರೆಗಳ ಸಂಘಗಳು ಆಸ್ಪತ್ರೆಗಳ ಪರ ಸರ್ಕಾರಕ್ಕೆ, ಸಹಕಾರ ಸಂಘಗಳ ನಿಬಂಧಕರಿಗೆ ಮತ್ತು ಯಶಸ್ವಿನಿ ಟ್ರಸ್ಟ್‌ಗೆ ಮನವಿಗಳನ್ನು ನೀಡಿ, ಪ್ರಾರಂಭದಲ್ಲಿ ಯೋಜನೆ ವ್ಯಾಪ್ತಿಯಿಂದ ವಿಮುಖರಾಗಿದ್ದಾರೆ. ಇದರಿಂದಾಗಿ ಗದಗ, ಮಂಡ್ಯ, ರಾಮನಗರ ಹಾಗೂ ಇತರೆ ಕೆಲವು ಜಿಲ್ಲೆಗಳಲ್ಲಿ ಸ್ವಲ್ಪ ಮಟ್ಟಿಗೆ ಅಡಚಣೆ ಉಂಟಾಗಿತ್ತು.<br>ಆಸ್ಪತ್ರೆಗಳ ಮೇಲಿನ ಆಕ್ಷೇಪಣೆಗಳನ್ನು ಸರ್ಕಾರವು ಪರಿಗಣಿಸಿ ಹಿಂದಿನ ಯಶಸ್ವಿನಿ ಯೋಜನೆಯಲ್ಲಿ ಇರುವ ಚಿಕಿತ್ಸೆ ದರಗಳು ಹೆಚ್ಚಾಗಿದ್ದಲ್ಲಿ ಆ ದರಗಳನ್ನು ಪರಿಗಣಿಸಲು ಅಥವಾ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ದರಗಳು ಹೆಚ್ಚಾಗಿದ್ದಲ್ಲಿ ಅವುಗಳನ್ನು ಪರಿಗಣಿಸಲು ಅಂದರೆ ಯಾವ ದರ ಅನುಕೂಲ ಆಗುತ್ತದೆಯೋ ಅದನ್ನು ಪರಿಗಣಿಸಲು ಸೂಚಿಸಿ ದಿನಾಂಕ:24-01-2023 ರಂದು ಸರ್ಕಾರವು ಆದೇಶ ಹೊರಡಿಸಲಾಗಿದೆ. (ಆದೇಶದ ಪ್ರತಿಯನ್ನು |

| | | |
|---|---|---|
| | | **ಅನುಬಂಧ–2** ರಲ್ಲಿ ನೀಡಲಾಗಿದೆ) ಅದರಂತೆ ಪರಿಷ್ಕೃತ ದರಗಳು ದಿನಾಂಕ:25–01–2023 ರಿಂದ ಅನ್ವಯವಾಗುವಂತೆ ಅಳವಡಿಸಿಕೊಂಡು ಜಾರಿಗೊಳಿಸಲಾಗಿದೆ. ಇದರಿಂದ ಚಿಕಿತ್ಸಾ ದರಗಳಲ್ಲಿ ಸ್ವಲ್ಪ ಮಟ್ಟಿಗೆ ಹೆಚ್ಚಳವಾದಂತಾಗಿದ್ದು, ಯೋಜನೆಯಿಂದ ಹಿಂದೆ ಸರಿದಿದ್ದ ಆಸ್ಪತ್ರೆಗಳು ಹೊಸದಾಗಿ ನೆಟ್‌ವರ್ಕ್ ಆಸ್ಪತ್ರೆಗಳಾಗಿ ಸೇರಿಕೊಳ್ಳಲು ಮುಂದೆ ಬಂದಿರುತ್ತವೆ. |
| ಇ) | ಇತ್ತೀಚೆಗೆ ಯೋಜನೆ ಜಾರಿಯಾದ ನಂತರ ಎಷ್ಟು ಮಂದಿ ಸದರಿ ಸೌಲಭ್ಯವನ್ನು ಪಡೆದುಕೊಂಡಿರುತ್ತಾರೆ: | ದಿನಾಂಕ:01–01–2023 ರಿಂದ ಯಶಸ್ವಿನಿ ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪ್ರಾರಂಭವಾಗಿದ್ದು, ದಿನಾಂಕ:25–06–2023 ರ ವರೆಗೆ ಒಟ್ಟು 21,340 ಫಲಾನುಭವಿಗಳು 433 ಯಶಸ್ವಿನಿ ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ರೂ.36.64 ಕೋಟಿ ಮೊತ್ತದ ಚಿಕಿತ್ಸೆಯನ್ನು ಪಡೆದಿರುತ್ತಾರೆ. |
| ಈ) | ನೋಂದಾಯಿತ ಸರ್ಕಾರಿ/ಖಾಸಗಿ ಆಸ್ಪತ್ರೆಗಳಿಗೆ ಸಂಪೂರ್ಣವಾಗಿ ವೆಚ್ಚವನ್ನು ಭರಿಸಲಾಗಿದೆಯೇ: | 4 ಕಂತುಗಳಲ್ಲಿ ಇಲ್ಲಿಯವರೆಗೆ 3142 ರೋಗಿಗಳಿಗೆ ಸಂಬಂಧಿಸಿದಂತೆ ಒಟ್ಟು 257 ಆಸ್ಪತ್ರೆಗಳಿಗೆ ರೂ.5.86 ಕೋಟಿ ಮೊತ್ತವನ್ನು ಪಾವತಿಸಲಾಗಿದೆ. ಏಪ್ರಿಲ್ 2023 ರಲ್ಲಿ ಚಿಕಿತ್ಸೆ ಪಡೆದಿರುವ 3029 ರೋಗಿಗಳಿಗೆ ಸಂಬಂಧ ಪಟ್ಟಂತೆ ರೂ.4.00 ಕೋಟಿ ಮೊತ್ತದ 5ನೇ ಕಂತಿನ ಬಿಲ್ಲು ಪರಿಶೀಲನೆಯಲ್ಲಿದ್ದು, ಪರಿಶೀಲನೆಯಾದ ನಂತರ ಜರೂರಾಗಿ ಆಸ್ಪತ್ರೆಗಳಿಗೆ ಪಾವತಿಸಲಾಗುವುದು. |
| ಉ) | ಈ ಯೋಜನೆಯನ್ನು ಹೆಚ್ಚು ಪರಿಣಾಮಕಾರಿಯಾಗಿ ವಿಸ್ತರಿಸಲು ಸರ್ಕಾರ ಚಿಂತಿಸುವುದೇ ಹಾಗಾದಲ್ಲಿ ವಿಸ್ತರಣೆಯ ರೂಪುರೇಷೆಗಳೇನು? | ಈ ಯೋಜನೆಯನ್ನು ಹೆಚ್ಚು ಪರಿಣಾಮಕಾರಿಯಾಗಿ ವಿಸ್ತರಿಸಲು ಜನಪ್ರತಿನಿಧಿಗಳು ಹಾಗೂ ಸಹಕಾರಿಗಳಿಂದ ಬರುವ ಸಲಹೆ ಸೂಚನೆಗಳನ್ನು ಪರಿಶೀಲಿಸಿ, ಸೂಕ್ತ ಸೂಚನೆಗಳನ್ನು ಆಯ್ದು ಅಳವಡಿಸಲು ಯಶಸ್ವಿನಿ ಟ್ರಸ್ಟ್ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಲಾಗುವುದು. |

**ಸಂಖ್ಯೆ: ಸಿಒ 133 ಸಿಎಲ್ಎಸ್ 2023**

K. N. Rajanna

**(ಕೆ.ಎನ್ ರಾಜಣ್ಣ)**
**ಸಹಕಾರ ಸಚಿವರು**

## ಅನುಬಂಧ – 1

## ರೂಪು ರೇಷೆಗಳು

1. ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಯಾವುದೇ ಸಹಕಾರ ಸಂಘ ಅಥವಾ ಸಹಕಾರ ಸಂಘಗಳಿಂದ ಸಂಘಟಿಸಲ್ಪಟ್ಟಿರುವ ಸ್ವ-ಸಹಾಯ ಗುಂಪುಗಳ ಸದಸ್ಯರು ಮೂರು ತಿಂಗಳು ಪೂರ್ಣಗೊಂಡಲ್ಲಿ ಅವರ ಕುಟುಂಬವನ್ನು ಒಂದು ಘಟಕವನ್ನಾಗಿ ಪರಿಗಣಿಸಿ, ವಾರ್ಷಿಕ ವಂತಿಗೆಯನ್ನು ಪಾವತಿಸಿ ಯಶಸ್ವಿನಿ ಯೋಜನೆ ಪಡೆಯಲು ಅರ್ಹರಿರುತ್ತಾರೆ. (ಕುಟುಂಬ ಎಂದರೆ ಪ್ರಾಥಮಿಕ ಸದಸ್ಯರ (Principal Member) ತಂದೆ/ತಾಯಿ, ಗಂಡ/ಹೆಂಡತಿ, ಗಂಡು ಮಕ್ಕಳು ಮದುವೆಯಾಗದ ಹೆಣ್ಣು ಮಕ್ಕಳು, ಸೊಸೆಯಂದಿರು ಮತ್ತು ಮೊಮ್ಮಕ್ಕಳು ಎಂದು ಅರ್ಥೈಯಿಸುವುದು.)

2. 2022–23ನೇ ಸಾಲಿಗೆ ಈ ಯೋಜನೆಯಡಿ

   (ಎ) ಗ್ರಾಮೀಣ ಸಹಕಾರ ಸಂಘಗಳ/ಸ್ವ-ಸಹಾಯ ಗುಂಪುಗಳ ಗರಿಷ್ಠ ನಾಲ್ಕು ಸದಸ್ಯರ ಕುಟುಂಬ ಒಂದಕ್ಕೆ ವಾರ್ಷಿಕ ರೂ.500/-ಗಳ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಹೆಚ್ಚುವರಿ ಸದಸ್ಯರಿಗೆ ರೂ.100/–ಗಳನ್ನು ಪಾವತಿಸತಕ್ಕದ್ದು,

   (ಬಿ) ಹಾಗೂ ನಗರ ಸಹಕಾರ ಸಂಘಗಳ ಗರಿಷ್ಠ ನಾಲ್ಕು ಸದಸ್ಯರ ಕುಟುಂಬ ಒಂದಕ್ಕೆ ವಾರ್ಷಿಕ ರೂ.1000/–ಗಳ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಹೆಚ್ಚುವರಿ ಸದಸ್ಯರಿಗೆ ರೂ.200/–ಗಳನ್ನು ಪಾವತಿಸತಕ್ಕದ್ದು.

   (ಸಿ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸದಸ್ಯರ ವಂತಿಗೆಯನ್ನು ಸರ್ಕಾರವೇ ಭರಿಸುತ್ತದೆ.

   (ಡಿ) ಸಹಕಾರಿ ಮೀನುಗಾರರು, ಸಹಕಾರಿ ಬೀಡಿ ಕಾರ್ಮಿಕರು ಮತ್ತು ಸಹಕಾರಿ ನೇಕಾರರು ಕೂಡ ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

3. ಮದುವೆಯಾಗಿರುವ ಹೆಣ್ಣು ಮಗಳು (ಹಾಗೂ ಅವಳ ಮಕ್ಕಳು) ಅವರ ತಂದೆ/ತಾಯಿ/ಅಣ್ಣ/ತಮ್ಮ ಕುಟುಂಬದಲ್ಲಿಯೇ ಅಂದರೆ ಪ್ರಧಾನ ಅರ್ಜಿದಾರರ ಕುಟುಂಬದಲ್ಲಿಯೇ ಯಾವುದೋ ಕಾರಣಕ್ಕೆ ವಾಸವಾಗಿದ್ದು ಅವರ ಪಾಲಿನ ವಂತಿಗೆ ಹಣ ಪಾವತಿಸಿದರೆ ಈ ಯೋಜನೆ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. ಆದಾಗ್ಯೂ, 2022–23ನೇ ಸಾಲಿನ ಯೋಜನೆಯ ಅವಧಿಯಲ್ಲಿ ಮದುವೆಯಾದ ಹೆಣ್ಣು ಮಗಳು ಅವರ ತಂದೆ/ತಾಯಿ/ಅಣ್ಣ/ತಮ್ಮ ಇವರ ಜೊತೆ ವಾಸವಾಗಿರದೇ ಸಂಘದ ಕಾರ್ಯವ್ಯಾಪ್ತಿ ಹೊರಗೆ ವಾಸವಿದ್ದರೆ ಅಂತಹ ಸಂದರ್ಭದಲ್ಲಿ ಮೇಲೆ ವಿವರಿಸಿರುವಂತೆ ಅವಿಭಕ್ತ ಕುಟುಂಬದ ಸದಸ್ಯೆಯಾಗಿರದೇ ಇರುವುದರಿಂದ ಈ ಯೋಜನೆ ಸೌಲಭ್ಯವನ್ನು ಪಡೆಯಲು ಅರ್ಹರಾಗಿರುವುದಿಲ್ಲ. ಆದರೆ, ಅವಳೇ ಸಹಕಾರ ಸಂಘದ ಸದಸ್ಯೆಯಾಗಿ ಮೂರು ತಿಂಗಳು ಕಳೆದಿದ್ದಲ್ಲಿ ಯಶಸ್ವಿನಿ ಯೋಜನೆಯ ಸೌಲಭ್ಯ ಪಡೆಯಬಹುದಾಗಿದೆ.

4. ಸದಸ್ಯತ್ವ ನೊಂದಣಿ ಅವದಿ ಸಾಲಿನಲ್ಲಿ ಮದುವೆಯಾಗದ ಹೆಣ್ಣುಮಕ್ಕಳಿಗೆ ಪ್ರಧಾನ ಅರ್ಜಿದಾರರು ವಂತಿಗೆ ಪಾವತಿಸಿದ್ದು, ಆನಂತರ ಮದುವೆಯಾಗಿದ್ದಲ್ಲಿ ಅಂತಹ ಮದುವೆಯಾದ ಹೆಣ್ಣು ಮಗಳು ಪ್ರಸಕ್ತ ಸಾಲಿನಲ್ಲಿ ಯಶಸ್ವಿನಿ ಯೋಜನೆಯಡಿಯಲ್ಲಿ ಚಿಕಿತ್ಸೆ ಪಡೆಯಲು ಅರ್ಹರಿರುತ್ತಾರೆ.

5. ಯಶಸ್ವಿನಿ ಯೋಜನೆಯಡಿ ಈ ಮೇಲೆ ಹೇಳಿರುವ ಅರ್ಹತೆಯುಳ್ಳ ವ್ಯಕ್ತಿಗಳು ಸದಸ್ಯರಾಗಲು ಯಾವುದೇ ವಯೋಮಿತಿ ನಿರ್ಬಂಧವಿರುವುದಿಲ್ಲ.

6. ನವಜಾತ ಶಿಶುವಿನ ತಾಯಿ ಹೆಸರು ಯಶಸ್ವಿನಿ ಕಾರ್ಡ್‌ನಲ್ಲಿದ್ದರೆ 30 ದಿನಗಳವರೆಗೆ ತಾಯಿ ಹೆಸರು ಇರುವ ಯಶಸ್ವಿನಿ ಕಾರ್ಡಿನ ಆಧಾರದ ಮೇಲೆ ಈ ಯೋಜನೆಯಡಿಯಲ್ಲಿ ಬರುವ ಸೌಲಭ್ಯವನ್ನು ಪಡೆಯಬಹುದು.

7. ಸಮಾಪನಗೊಂಡಿರುವ ಸಹಕಾರ ಸಂಘಗಳ, ನಿಷ್ಕ್ರಿಯ ಸಹಕಾರ ಸಂಘಗಳ ಮತ್ತು ನೌಕರರ ಸಹಕಾರ ಸಂಘಗಳ ಸದಸ್ಯರಿಗೆ ಈ ಯೋಜನೆ ಅನ್ವಯಿಸುವುದಿಲ್ಲ.

8. ಪ್ರಧಾನ ಅರ್ಜಿದಾರರು ಮತ್ತು ಅವನ ಕುಟುಂಬದ ಯಾವುದೇ ಸದಸ್ಯನು ಸರ್ಕಾರಿ ನೌಕರರಾಗಿ ಅಥವಾ ಖಾಸಗಿ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು ಮಾಸಿಕ ರೂ.30,000/- ಕ್ಕಿಂತ ಹೆಚ್ಚು ಅಥವಾ ವಾರ್ಷಿಕ ರೂ.3,60,000/- ಕ್ಕಿಂತ ಹೆಚ್ಚು ಒಟ್ಟು ವೇತನ ಪಡೆಯುತ್ತಿದ್ದಲ್ಲಿ ಈ ಯೋಜನೆಗೆ ಅರ್ಹರಿರುವುದಿಲ್ಲ. ಯಾವುದೇ ಆರೋಗ್ಯ ವಿಮಾ ಯೋಜನೆಯಡಿಯಲ್ಲಿ ಸದಸ್ಯರಾಗಿದ್ದಲ್ಲಿ ಅಂತಹವರು ಯಶಸ್ವಿನಿ ಯೋಜನೆಯಡಿ ಸದಸ್ಯನಾಗಲು ಅರ್ಹನಿರುವುದಿಲ್ಲ.

9. ಯಶಸ್ವಿನಿ ಯೋಜನೆಯಡಿ ಸದಸ್ಯರಿಗೆ ಯೂನಿಕ್ ಐಡಿ ಸಂಖ್ಯೆಯುಳ್ಳ ಪ್ಲಾಸ್ಟಿಕ್ ಕಾರ್ಡ್‌ನ್ನು ಒದಗಿಸಲಾಗುವುದು. ಸದಸ್ಯರು ಈ ಸ್ಮಾರ್ಟ್‌ಕಾರ್ಡ್‌ನ್ನು ಬಳಸಿ ನಗದು ರಹಿತ ಚಿಕಿತ್ಸೆಗಳನ್ನು ಪಡೆಯಬಹುದಾಗಿದೆ.

10. ಈ ಕೆಳಕಂಡ ಸೌಲಭ್ಯಗಳನ್ನು ಯಶಸ್ವಿನಿ ಸದಸ್ಯರಿಗೆ ಒದಗಿಸಲಾಗುವುದು.

ಎ) ಯಶಸ್ವಿನಿ ಯೋಜನೆಯಡಿಯಲ್ಲಿ ಮುಖ್ಯವಾಗಿ ಹೃದಯಕ್ಕೆ ಸಂಬಂಧಿಸಿದ ರೋಗಗಳು ಕಿವಿ, ಮೂಗು, ಗಂಟಲು ವ್ಯಾದಿಗಳು, ಕರುಳಿನ ಖಾಯಿಲೆಗಳು, ನರಗಳಿಗೆ ಸಂಬಂಧಿಸಿದ ಖಾಯಿಲೆಗಳು, ಕಣ್ಣಿನ ಖಾಯಿಲೆಗಳು, ಮೂಳೆ ರೋಗಗಳು, ಸ್ತ್ರೀಯರಿಗೆ ಸಂಬಂಧಿಸಿದ ಖಾಯಿಲೆಗಳು ಹಾಗೂ ಈ ಯೋಜನೆಯಡಿ ಇತರೆ ಅನುಸೂಚಿತ ಸಾಮಾನ್ಯ ರೋಗಿಗಳಿಗೆ ಸಂಬಂಧಿಸಿದ ಚಿಕಿತ್ಸಾ ಸೌಲಭ್ಯಗಳನ್ನು ಗುರ್ತಿಸಿದ ರಾಜ್ಯದ ಯಶಸ್ವಿನಿ ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಒದಗಿಸಲಾಗುವುದು.

ಬಿ) ಪ್ರಸ್ತುತ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಲ್ಲಿ ಅಳವಡಿಸಿಕೊಂಡಿರುವ 1650 ಚಿಕಿತ್ಸೆಗಳನ್ನು ಮತ್ತು 478 ICU ಚಿಕಿತ್ಸೆಗಳೂ ಸೇರಿ ಒಟ್ಟು 2128 ಚಿಕಿತ್ಸೆಗಳನ್ನು ಯಶಸ್ವಿನಿ ಯೋಜನೆಗೆ ಅಳವಡಿಸಿಕೊಳ್ಳಲಾಗಿದೆ. ಮುಂದೆ ಯಶಸ್ವಿನಿ ಟ್ರಸ್ಟ್‌ದಲ್ಲಿ ಚರ್ಚಿಸಿ ಅಗತ್ಯತೆ ಕಂಡು ಬಂದಲ್ಲಿ ಚಿಕಿತ್ಸೆಗಳು ಮತ್ತು ದರಗಳ ಪರಿಷ್ಕರಣೆಗೆ ಕ್ರಮವಿಡಲಾಗುವುದು.

ಡಿ) ಯಶಸ್ವಿನಿ ಸದಸ್ಯರಿಗೆ ಜನರಲ್ ವಾರ್ಡ್‌ನಲ್ಲಿ ಚಿಕಿತ್ಸಾ ಸೌಲಭ್ಯ ಪಡೆಯುವಲ್ಲಿ ಅರ್ಹತೆ ಹೊಂದಿರುತ್ತಾರೆ. ರೋಗಿಗಳು ಸ್ವ ಇಚ್ಛೆಯೊಂದಿಗೆ ಉನ್ನತ ವಾರ್ಡ್ ಕೋರಿದಲ್ಲಿ **Sharing 2 or 3 bed** ಗೆ ೧೦% ಮಿತಿ ಮತ್ತು **Private Room** ಅಥವಾ **Single Bed** ತೆಗೆದುಕೊಂಡಲ್ಲಿ **25%** ರಷ್ಟು ಹೆಚ್ಚಳದೊಂದಿಗೆ ಉನ್ನತ ವಾರ್ಡ್ ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸಿದೆ. ಹೆಚ್ಚುವರಿ ಮೊತ್ತವನ್ನು ರೋಗಿಗಳೇ ಭರಿಸತಕ್ಕದ್ದು. ಯಶಸ್ವಿನಿ ಯೋಜನೆಯಲ್ಲಿ ನೆಟ್‌ವರ್ಕ್ ಆಸ್ಪತ್ರೆಯಲ್ಲಿ ಒದಗಿಸಿರುವ ಚಿಕಿತ್ಸಾ ಸೌಲಭ್ಯದಲ್ಲಿ ಔಷಧಿ ವೆಚ್ಚ, ಆಸ್ಪತ್ರೆ ವೆಚ್ಚ, ಶಸ್ತ್ರಚಿಕಿತ್ಸೆಯ ವೆಚ್ಚ, ಆಪರೇಶನ್ ಥೀಯೆಟರ್ ಬಾಡಿಗೆ. ಅರಿವಳಿಕೆ ತಜ್ಞರ ಫೀ, ಸರ್ಜನ್ ಫೀ, ಕನ್ಸಲ್‌ಟೆಂಟ್ ಫೀ, ಬೆಡ್ ಚಾರ್ಜ್, ನರ್ಸ್ ಫೀ ಇತ್ಯಾದಿ ವೆಚ್ಚ ಒಳಗೊಂಡಿರುತ್ತದೆ.

ಇ) ಯಶಸ್ವಿನಿ ಯೋಜನೆಯಲ್ಲಿ ಪ್ಯಾಕೇಜನಲ್ಲಿ Implants ಅಗತ್ಯವಿರುವ ಕಡೆ Implants ದರವನ್ನು ಒಳಗೊಂಡಿರುತ್ತದೆ. (Ex. Knee replacement, lance in cataract surgery) ಒಂದು ವೇಳೆ ಫಲಾನುಭವಿಗಳ ಉನ್ನತ Implants ಅಥವಾ lance ಪಡೆಯಲು ಸ್ವ – ಇಚ್ಛೆಯಿಂದ ಒಪ್ಪಿಗೆ ಸೂಚಿಸಿದಲ್ಲಿ, ಅಂತಹ ಉನ್ನತ Implants ಮತ್ತು lance ಗೆ ತಗಲುವ ವ್ಯತ್ಯಾಸದ ಹೆಚ್ಚುವರಿ ಮೊತ್ತವನ್ನು ಅಂತಹ ಫಲಾನುಭವಿಗಳು ಭರಿಸಿ ಚಿಕಿತ್ಸೆಯನ್ನು ಪಡೆಯತಕ್ಕದ್ದು.

ಎಫ್) ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಯಶಸ್ವಿನಿ ಸದಸ್ಯರಿಗೆ ಹೊರ ರೋಗಿ ಚಿಕಿತ್ಸೆಗೆ (OPD) ಗರಿಷ್ಠ ರೂ.200/–ಗಳನ್ನು (ಮೂರು ತಿಂಗಳ ಅವಧಿಗೆ) ಮಿತಿ ನಿಗಧಿಪಡಿಸಿದ್ದು, ಈ ಪೈಕಿ ರೂ.100/–ಗಳನ್ನು ಯಶಸ್ವಿನಿ ಟ್ರಸ್ಟ್‌ವತಿಯಿಂದ ಪಾವತಿಸಲಾಗುವುದು.

••••••••••••••••••••••••••

ಅನುಬಂಧ-2

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಯಶಸ್ವಿನಿ ಯೋಜನೆಯ ಕೆಲವು ಚಿಕಿತ್ಸಾ ದರಗಳ ಪರಿಷ್ಕರಣೆ ಬಗ್ಗೆ.

**ಉಲ್ಲೇಖ:** 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 67ರಲ್ಲಿನ ಘೋಷಣೆ.

***

**ಪ್ರಸ್ತಾವನೆ :**

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ 2022-23ನೇ ಸಾಲಿನ ಆಯವ್ಯಯದ ಭಾಷಣದಲ್ಲಿ ಘೋಷಿಸಿದಂತೆ ಯಶಸ್ವಿನಿ ಯೋಜನೆಯನ್ನು ಪರಿಷ್ಕರಿಸಿ ಆದೇಶ ಹೊರಡಿಸಲಾಗಿದೆ.

ಈ ಹಿಂದೆ ಸಹಕಾರ ಇಲಾಖೆಯಲ್ಲಿ ಯಶಸ್ವಿನಿ ಯೋಜನೆಯನ್ನು 2003 ರಲ್ಲಿ ಪ್ರಾರಂಭಿಸಿದ್ದು, 2003-04 ರಿಂದ 2017-18 ರವರೆಗೆ ಜಾರಿಯಲ್ಲಿದ್ದು ನಂತರ ದಿನಾಂಕ: 31-05-2018 ರಿಂದ ಈ ಯೋಜನೆಯು ಸ್ಥಗಿತಗೊಂಡಿರುತ್ತದೆ.

ಈ ಹಿಂದಿನ ಯಶಸ್ವಿನಿ ಯೋಜನೆಯು 823 ಶಸ್ತ್ರ ಚಿಕಿತ್ಸೆಗಳನ್ನು ಒಳಗೊಂಡಿತ್ತು. ಪ್ರಸ್ತುತ ಪರಿಷ್ಕೃತ ಯಶಸ್ವಿನಿ ಯೋಜನೆಯಡಿ ಆಯುಷ್ಮಾನ್ ಭಾರತ್ ಯೋಜನೆಯಡಿ ನಿಗದಿಪಡಿಸಿರುವ 1650 ಚಿಕಿತ್ಸೆಗಳನ್ನು ಅದೇ ದರಗಳೊಂದಿಗೆ ಅಳವಡಿಸಿಕೊಳ್ಳಲಾಗಿರುತ್ತದೆ.

ಭಾರತೀಯ ವೈದ್ಯಕೀಯ ಮಂಡಳಿ IMA,, ಕರ್ನಾಟಕ ಮೆಡಿಕಲ್ ಕೌನ್ಸಿಲ್ ಹಾಗೂ ಖಾಸಗಿ ಆಸ್ಪತ್ರೆಗಳ ಒಕ್ಕೂಟಗಳು ಈ ಹಿಂದೆ ಇದ್ದ ಯಶಸ್ವಿನಿ ಚಿಕಿತ್ಸಾ ದರಗಳಿಗಿಂತ ಈಗಿನ ದರಗಳು ಕಡಿಮೆ ಇರುವುದಾಗಿಯೂ, ರಾಷ್ಟ್ರಮಟ್ಟದಲ್ಲಿ ಆಯುಷ್ಮಾನ್ ಭಾರತ್ ದರಗಳು ಹೆಚ್ಚಿದ್ದರೂ, ರಾಜ್ಯದಲ್ಲಿ ಕಡಿಮೆ ದರಗಳನ್ನು ನಿಗದಿಪಡಿಸಿರುವುದಾಗಿ ಆಕ್ಷೇಪಿಸಿ ಯಶಸ್ವಿನಿ ಯೋಜನೆಯಲ್ಲಿ ನೋಂದಣಿಯಾಗಿರುವುದಿಲ್ಲ. ಇದರಿಂದಾಗಿ ಅನೇಕ ಜಿಲ್ಲೆಗಳಲ್ಲಿ ಯೋಜನೆಯ ಫಲಾನುಭವಿಗಳಿಗೆ ಚಿಕಿತ್ಸೆ ಪಡೆಯಲು ಕಷ್ಟಸಾಧ್ಯವಾಗಿರುತ್ತದೆ.

ಅಲ್ಲದೆ ಆಯುಷ್ಮಾನ್ ಭಾರತ್ ಯೋಜನೆಯಲ್ಲಿ ರೆಫರಲ್ ವ್ಯವಸ್ಥೆ ಇರುವುದರಿಂದ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಅಥವಾ ಕಡಿಮೆ ದರದಲ್ಲಿ ಚಿಕಿತ್ಸೆಗೆ ಅವಕಾಶವಿರುತ್ತದೆ. ಖಾಸಗಿ ಆಸ್ಪತ್ರೆಗಳಲ್ಲಿ ಆಸ್ಪತ್ರೆಗಳ ನಿರ್ವಹಣೆ, ಮೂಲ ಸೌಕರ್ಯಗಳು, ತಜ್ಞ ವೈದ್ಯರಿಗೆ ಹೆಚ್ಚಿನ ವೇತನ ನೀಡಬೇಕಾಗಿರುವುದರಿಂದ ನಿಗದಿಪಡಿಸಿರುವ ದರಗಳಲ್ಲಿ ಚಿಕಿತ್ಸೆ ನೀಡಲು ಸಾಧ್ಯವಾಗುವುದಿಲ್ಲ. ನಿಗದಿಪಡಿಸಿರುವ ದರಗಳು Consumables ಗೆ ಸಾಕಾಗುವುದಿಲ್ಲವೆಂದು ಆಸ್ಪತ್ರೆಗಳ ಪರವಾಗಿ ಪ್ರತಿಭಟನೆಯನ್ನು ವ್ಯಕ್ತಪಡಿಸಿ ಸರ್ಕಾರಕ್ಕೆ ಮತ್ತು ಯಶಸ್ವಿನಿ ಟ್ರಸ್ಟ್‌ಗೆ ಮನವಿಗಳನ್ನು ನೀಡಿ ಹೆಚ್ಚಿನ ಆಸ್ಪತ್ರೆಗಳು ಯಶಸ್ವಿನಿ ಯೋಜನೆಯಲ್ಲಿ ಪಾಲ್ಗೊಳ್ಳದಂತೆ ತಡೆಹಿಡಿದಿರುತ್ತಾರೆ.

ಮೇಲಿನ ಅಂಶಗಳ ಹಿನ್ನಲೆಯಲ್ಲಿ ಪ್ರಸ್ತುತ ಯಶಸ್ವಿನಿ ಯೋಜನೆಯ ಕೆಲವಾರು ಚಿಕಿತ್ಸೆ ದರಗಳು ಹಿಂದಿನ ಯಶಸ್ವಿನಿ ಯೋಜನೆಯ ದರಗಳಿಗಿಂತ ಕಡಿಮೆಯಿರುವುದನ್ನು ಸರ್ಕಾರವು ಪರಿಶೀಲಿಸಿ, ಎಲ್ಲೆಲ್ಲಿ ಪರಿಷ್ಕೃತ ಯಶಸ್ವಿನಿ ಯೋಜನೆಯ ದರಗಳು ಹಿಂದಿನ (ಅಂದರೆ 2018ರಲ್ಲಿ ಜಾರಿಯಲ್ಲಿದ್ದಂತೆ) ಯಶಸ್ವಿನಿ ಯೋಜನೆಯ ದರಗಳಿಗಿಂತ ಕಡಿಮೆಯಿರುತ್ತದೆಯೋ ಅಂತಹ ಚಿಕಿತ್ಸೆಗಳಿಗೆ ಮಾತ್ರ ಹಿಂದಿನ ಯಶಸ್ವಿನಿ ಯೋಜನೆಯ ದರಗಳನ್ನೇ ಅಳವಡಿಸಿಕೊಳ್ಳುವುದು ಸೂಕ್ತವೆಂದು ಸರ್ಕಾರವು ತೀರ್ಮಾನಿಸಿ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಒ 02 ಸಿಎಲ್ಎಸ್ 2023, ಬೆಂಗಳೂರು, ದಿನಾಂಕ: 24-01-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2022-23ನೇ ಸಾಲಿನಿಂದ ಪ್ರಾರಂಭವಾಗಿರುವ ಯಶಸ್ವಿನಿ ಯೋಜನೆಗೆ ***ಪ್ರಸ್ತುತ ಅಳವಡಿಸಿಕೊಂಡಿರುವ ಆಯುಷ್ಮಾನ್ ಭಾರತ್ ಯೋಜನೆಯ ದರಗಳು, ಕೆಲವು ಚಿಕಿತ್ಸೆಗಳಿಗೆ ಹಿಂದಿನ (ಅಂದರೆ 2018ರಲ್ಲಿ ಜಾರಿಯಲ್ಲಿದ್ದಂತೆ) ಯಶಸ್ವಿನಿ ಯೋಜನೆಯ ದರಗಳಿಗಿಂತ ಎಲ್ಲೆಲ್ಲಿ ಕಡಿಮೆಯಿರುತ್ತದೆಯೋ ಅಂತಹ ಚಿಕಿತ್ಸೆಗಳಿಗೆ ಮಾತ್ರ ಹಿಂದಿನ ಯಶಸ್ವಿನಿ ಯೋಜನೆಯ ದರಗಳನ್ನೇ ಅಳವಡಿಸಿಕೊಳ್ಳಲು*** ಅನುಮತಿ ನೀಡಿ ಆದೇಶಿಸಿದೆ.

...2

ಮಾನ್ಯ ಮುಖ್ಯಮಂತ್ರಿಯವರು ದಿನಾಂಕ: 21-01-2023 ರಂದು ನೀಡಿರುವ ಅನುಮೋದನೆಯಂತೆ ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Radha H.C 24/1/23

**(ರಾಧ ಹೆಚ್.ಸಿ.)**
ಸರ್ಕಾರದ ಅಧೀನ ಕಾರ್ಯದರ್ಶಿ-3(ಪ್ರ),
ಸಹಕಾರ ಇಲಾಖೆ.
24-01-23

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿ, ಅದರ 250 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು:**

1. ಸರ್ಕಾರದ ಮುಖ್ಯಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬೆಂಗಳೂರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ.
8. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
9. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಚಾಮರಾಜಪೇಟೆ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತ, ಬೆಂಗಳೂರು.
12. ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಅಧ್ಯಕ್ಷರು/ ವ್ಯವಸ್ಥಾಪಕ ನಿರ್ದೇಶಕರುಗಳು.
13. ರಾಜ್ಯದ ಸಹಕಾರ ಸಂಘಗಳ ಪ್ರಾಂತೀಯ ಜಂಟಿ ನಿಬಂಧಕರುಗಳು ಬೆಂಗಳೂರು/ ಮೈಸೂರು/ ಬೆಳಗಾವಿ/ ರಾಯಚೂರು.
14. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಜಿಲ್ಲಾ ಉಪನಿಬಂಧಕರುಗಳು.
15. ರಾಜ್ಯದ ಎಲ್ಲಾ ಉಪ ವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು.
16. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
17. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು.
18. ವಿಶೇಷ ಕರ್ತವ್ಯಾಧಿಕಾರಿಗಳು ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿರವರ ಆಪ್ತಕಾರ್ಯದರ್ಶಿ, ಸಹಕಾರ ಇಲಾಖೆ.
19. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಯಶಸ್ವಿನಿ ಸಹಕಾರಿ ಸದಸ್ಯರ ಆರೋಗ್ಯ ರಕ್ಷಣಾ ಟ್ರಸ್ಟ್.

ನಿಬಂಧಕರ ಮೂಲಕ